## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25 ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ:445 ರನ್ವಯ ಪುತ್ತೂರು ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ (ಉಡುಪಿ ಬದಲಿಗೆ) ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥವನ್ನು ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಟಿಡಿ 7 ಟಿಡಿಓ 2024, ದಿನಾಂಕ:12.08.2024.
2. ಸರ್ಕಾರದ ಆದೇಶ ಸಂಖ್ಯೆ: ಟಿಡಿ 73 ಟಿಡಿಓ 2024 (ಭಾಗ-1) ದಿನಾಂಕ:28.08.2024.
3. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರ ಸಂಖ್ಯೆ: ಸಾಆ/ಪೀಕ-3/ಪಿಆರ್-139/2012-13, ದಿನಾಂಕ:29.11.2024.
4. ಆಯುಕ್ತರು, ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಸಾಆ ಪೀಕ-3/ಪಿಆರ್ -106/2024-25, ದಿನಾಂಕ 01.02.2025.

*****

**ಪ್ರಸ್ತಾವನೆ:-**

2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ:445 ರಲ್ಲಿ "**ಉಡುಪಿ**, ಚಿಕ್ಕಬಳ್ಳಾಪುರ, ನೆಲಮಂಗಲ, ಮಡಿಕೇರಿ, ಮಧುಗಿರಿ ಮತ್ತು ಹುಣಸೂರಿನಲ್ಲಿ ಅಂದಾಜು ರೂ.36.00 ಕೋಟಿಗಳ ವೆಚ್ಚದಲ್ಲಿ ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥಗಳು ಹಾಗೂ ದೇವನಹಳ್ಳಿ ಮತ್ತು ತುಮಕೂರಿನಲ್ಲಿ ಒಟ್ಟು ರೂ.10.00 ಕೋಟಿಗಳ ವೆಚ್ಚದಲ್ಲಿ ಸೀಜಿಂಗ್ ಯಾರ್ಡ್‌ಗಳನ್ನು ನಿರ್ಮಿಸಲಾಗುವುದು" ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ನಿಧಿಯಡಿ ಒದಗಿಸಿರುವ ಅನುದಾನದಿಂದ ಸಾರಿಗೆ ಇಲಾಖೆಗೆ ಸಂಬಂಧಿಸಿದ ಒಟ್ಟು ರೂ.274,03,65,653.00 ಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಕ್ರಿಯಾಯೋಜನೆಯಲ್ಲಿ ಆಯವ್ಯಯ ಭಾಷಣ ಕಂಡಿಕೆ 445 ರ ಕಾಮಗಾರಿಗಳಿಗೆ ಅನುದಾನದ ಅವಕಾಶ ಮಾಡಿಕೊಳ್ಳಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ: 445ರನ್ವಯ **ಉಡುಪಿ**, ಚಿಕ್ಕಬಳ್ಳಾಪುರ, ನೆಲಮಂಗಲ, ಮಡಿಕೇರಿ, ಮಧುಗಿರಿ ಮತ್ತು ಹುಣಸೂರಿನಲ್ಲಿ ಅಂದಾಜು 36 ಕೋಟಿ ರೂ.ಗಳ ವೆಚ್ಚದಲ್ಲಿ ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥಗಳು ಹಾಗೂ ದೇವನಹಳ್ಳಿ ಮತ್ತು ತುಮಕೂರಿನಲ್ಲಿ ಒಟ್ಟು ರೂ.10.00 ಕೋಟಿಗಳ ವೆಚ್ಚದಲ್ಲಿ ಸೀಜಿಂಗ್ ಯಾರ್ಡ್‌ಗಳನ್ನು ನಿರ್ಮಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರದಲ್ಲಿ, ಉಡುಪಿಯಲ್ಲಿ ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥ ನಿರ್ಮಾಣಕ್ಕಾಗಿ ಮಂಜೂರು ಮಾಡಿದ್ದ, ಉಡುಪಿ ಜಿಲ್ಲೆ, ಉಡುಪಿ ತಾಲೂಕು ಅಲೆವೂರು ಗ್ರಾಮದ ಸ.ನಂ.20/ಪಿ1 ರಲ್ಲಿ 5.00 ಎಕರೆ ಜಮೀನು ಡೀಮ್ಡ್ ಫಾರೆಸ್ಟ್ ಪಟ್ಟಿಯಲ್ಲಿರುವುದರಿಂದ ಅರಣ್ಯೇತರ ಉದ್ದೇಶಕ್ಕೆ ಬಳಸುವುದು ಅರಣ್ಯ ಸಂರಕ್ಷಣಾ ಕಾಯ್ದೆಯ ಉಲ್ಲಂಘನೆಯಾಗುತ್ತದೆ ಎಂದು ಅರಣ್ಯ ಇಲಾಖೆಯು ಆಕ್ಷೇಪಿಸಿದ್ದು, ಈ ಸಂಬಂಧ ಸದರಿ ಪ್ರದೇಶವನ್ನು ಡೀಮ್ಡ್ ಫಾರೆಸ್ಟ್ ಪಟ್ಟಿಯಿಂದ ಹೊರಗಿಡುವ ಕುರಿತಂತೆ ಅರಣ್ಯ ಇಲಾಖೆ ಮತ್ತು ಜಿಲ್ಲಾಡಳಿತದೊಂದಿಗೆ ಪತ್ರ ವ್ಯವಹಾರಗಳು ಜಾರಿಯಲ್ಲಿದ್ದು, ಈ ದಿನದವರೆಗೆ ಸದರಿ ಜಮೀನನ್ನು ಸಾರಿಗೆ ಇಲಾಖೆಯ ಸುಪರ್ದಿಗೆ ಪಡೆಯಲು ಸಾಧ್ಯವಾಗಿರುವುದಿಲ್ಲ.

ಆದರೆ, ಪುತ್ತೂರು ಹೋಬಳಿಯ ಮುಂಡೂರು ಗ್ರಾಮದಲ್ಲಿ ಸರ್ವೆ ನಂ 130/1A ಹಾಗೂ 142/1 ರಲ್ಲಿ ಒಟ್ಟು 5.40 ಎಕರೆ ಜಮೀನನ್ನು ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥ ಮತ್ತು ಚಾಲನ ತರಬೇತಿ ಕೇಂದ್ರ ಸ್ಥಾಪನೆಗೆ ಕಾಯ್ದಿರಿಸಿ ಸಾರಿಗೆ ಇಲಾಖೆಗೆ ಮಂಜೂರು ಮಾಡಿ ಆದೇಶಿಸಿರುವುದರಿಂದ, 2024-25 ಸಾಲಿನ ಅನುಮೋದಿತ ಕ್ರಿಯಾ ಯೋಜನೆಯ ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥವನ್ನು ನಿರ್ಮಿಸುವ ಯೋಜನೆಯಲ್ಲಿ, ಉಡುಪಿಗೆ ಬದಲಾಗಿ ಪುತ್ತೂರನ್ನು ಸೇರ್ಪಡೆಗೊಳಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆಯುಕ್ತರು ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರದಲ್ಲಿ, **ಪುತ್ತೂರು** ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥದ ಕಾಮಗಾರಿಯನ್ನು ಅಂದಾಜು ರೂ.**7,80,80,000ಗಳ** ವೆಚ್ಚದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಇವರ ವತಿಯಿಂದ ಕಾಮಗಾರಿಯನ್ನು ಕೈಗೊಳ್ಳಲು ವಿವರವಾದ ಯೋಜನಾ ವರದಿಯೊಂದಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಕೆ ಡಿ.
[illegible]
21/2/25

| Sl. No. | Particulars | Total amount |
|---|---|---|
| | **PART-A** | |
| 1 | Test Track for LMV and Two Wheelers | 3,19,92,000.00 |
| 2 | Site Levelling Formation Embankment cutting & Development of Track | 1,51,63,000.00 |
| 3 | Construction of Compound Wall & fencing work | 82,17,000.00 |
| 4 | Construction of Administrative Block | 85,74,000.00 |
| 5 | Water supply & Borewell & OH Tank Platforms | 23,67,000.00 |
| 6 | Construction of Toilet Block | 22,43,000.00 |
| 7 | Providing Septic Tank & Soak pot, RWH | 11,57,000.00 |
| 8 | Public Waiting shelter & Two Wheeler Parking Shed | 18,35,000.00 |
| 9 | Landscaping & Water supply Arrangements | 15,13,000.00 |
| 10 | Furniture's to control rooms & ADM Building | 6,51,000.00 |
| 11 | Electrification and Yard Lighting | 35,00,000.00 |
| | **PART-B** | |
| 1 | PMC and design & Soil testing charges/Arch. Fee | 7,50,000.00 |
| 2 | Mescom Deposit & other statutory deposits | 1,00,000.00 |
| 3 | Miscellaneous and rounding off | 18,000.00 |
| | **Grand Total of Rs.** | **7,80,80,000.00** |

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಟಿಡಿ 73 ಟಿಡಿಒ 2024,**
**ಬೆಂಗಳೂರು, ದಿನಾಂಕ:21.02.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಟಿಡಿ 07 ಟಿಡಿಒ 2024, ದಿನಾಂಕ:12.08.2024 ರಲ್ಲಿ 2024-25ನೇ ಸಾಲಿನ ಲೆಕ್ಕಶೀರ್ಷಿಕೆ: 2041-00-102-0-03-ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ನಿಧಿಯಿಂದ ಅನುದಾನ-051-ಸಾಮಾನ್ಯ ವೆಚ್ಚಗಳಡಿ ಒದಗಿಸಿರುವ ಅನುದಾನದಿಂದ ಅನುಮೋದನೆಯಾಗಿರುವ ಕ್ರಿಯಾಯೋಜನೆಯ ಅನುಬಂಧ 2(b)ರ ಕ್ರಮ ಸಂಖ್ಯೆ 16ರಲ್ಲಿನ "ಉಡುಪಿಯಲ್ಲಿ ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥವನ್ನು" ಎಂಬ ಬದಲಿಗೆ "ಪುತ್ತೂರು ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥವನ್ನು" ಎಂದು ತಿದ್ದುಪಡಿ ಮಾಡಿ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಟಿಡಿ 73 ಟಿಡಿಒ 2024 (ಭಾಗ-1) ದಿನಾಂಕ:28.08.2024 ರ ಆದೇಶದಲ್ಲಿ, 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ: 445ರನ್ವಯ **ಉಡುಪಿ**, ಚಿಕ್ಕಬಳ್ಳಾಪುರ, ನೆಲಮಂಗಲ, ಮಡಿಕೇರಿ, ಮಧುಗಿರಿ ಮತ್ತು ಹುಣಸೂರಿನಲ್ಲಿ ಅಂದಾಜು ರೂ.36.00 ಕೋಟಿಗಳ ವೆಚ್ಚದಲ್ಲಿ, ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥಗಳು ಹಾಗೂ ದೇವನಹಳ್ಳಿ ಮತ್ತು ತುಮಕೂರಿನಲ್ಲಿ ಒಟ್ಟು ರೂ.10.00 ಕೋಟಿಗಳ ವೆಚ್ಚದಲ್ಲಿ ಸಿಜಿಂಗ್ ಯಾರ್ಡ್‌ಗಳನ್ನು ನಿರ್ಮಿಸಲು ತಾತ್ವಿಕ ಅನುಮೋದನೆ ನೀಡಿರುವ ಆದೇಶದಲ್ಲಿ 'ಉಡುಪಿ' ಬದಲಿಗೆ 'ಪುತ್ತೂರು' ಎಂದು ತಿದ್ದುಪಡಿ ಮಾಡಿ ಆದೇಶಿಸಿದೆ.

ಮುಂದುವರೆದು, ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ:445 ರನ್ವಯ, **ಪುತ್ತೂರು** ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ (**ಉಡುಪಿ ಬದಲಿಗೆ**) ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥದ ಕಾಮಗಾರಿಯನ್ನು ಅಂದಾಜು ರೂ.**780.80 ಲಕ್ಷಗಳ** (ಏಳು ನೂರು ಎಂಭತ್ತು ಲಕ್ಷದ ಎಂಭತ್ತು ಸಾವಿರ ರೂಪಾಯಿಗಳು ಮಾತ್ರ) ವೆಚ್ಚದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಇವರ ವತಿಯಿಂದ ಕೈಗೊಳ್ಳಲು ಈ ಕೆಳಕಂಡ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

Pushpa V. S.

**ಷರತ್ತುಗಳು:-**

1. ಕೆ.ಟಿ.ಪಿ.ಪಿ. ಕಾಯ್ದೆ ಮತ್ತು ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು ಹಾಗೂ ಸರ್ಕಾರವು ಈ ಸಂಬಂಧ ಕಾಲಕಾಲಕ್ಕೆ ಹೊರಡಿಸಿರುವ ಎಲ್ಲಾ ಆದೇಶಗಳನ್ನು ಹಾಗೂ ನೀಡುವ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
2. ಅಂದಾಜು ಪಟ್ಟಿಯನ್ನು ಸರ್ಕಾರದ ಆದೇಶ ಸಂಖ್ಯೆ: ಸಾರಿಇ 150 ಸಾಇಪ 2015, ದಿನಾಂಕ:05.05.2017ರಲ್ಲಿ ರಚಿಸಲಾಗಿರುವ ತಾಂತ್ರಿಕ ಸಲಹಾ ಮತ್ತು ಅಂದಾಜು ಪಟ್ಟಿ ಪರಿಶೀಲನಾ ಸಮಿತಿಯಿಂದ ಪರಿಶೀಲಿಸಿಕೊಳ್ಳತಕ್ಕದ್ದು.
3. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 55 ಪಿಆರ್‌ಒ ಸೆಲ್ 2024, ದಿನಾಂಕ:17.05.2005. ರನ್ವಯ ಕಾಮಗಾರಿಯ ಅಂದಾಜು ವೆಚ್ಚ ರೂ.2.00 ಕೋಟಿ (ಎರಡು ಕೋಟಿ ರೂಪಾಯಿಗಳು ಮಾತ್ರ) ಗಳು ಮೀರಿದಲ್ಲಿ ಕಾಮಗಾರಿಗಳ ಗುಣಮಟ್ಟದ ಬಗ್ಗೆ Third Party Inspection ಕಡ್ಡಾಯವಾಗಿ ಮಾಡತಕ್ಕದ್ದು.
4. ಉತ್ತಮ ಗುಣಮಟ್ಟದ ಕಾಮಗಾರಿ ನಿರ್ವಹಿಸಿರುವುದನ್ನು ದೃಡಪಡಿಸಿಕೊಳ್ಳತಕ್ಕದ್ದು.
5. ಕಾಮಗಾರಿಯ ಆರ್ಥಿಕ ಮತ್ತು ಭೌತಿಕ ಪ್ರಗತಿಯ ವಿವರಗಳನ್ನು ಕಡ್ಡಾಯವಾಗಿ ಒದಗಿಸತಕ್ಕದ್ದು ಮತ್ತು ಎಂಪಿಕ್ ನಮೂನೆಯಲ್ಲಿ ಮಾಹಿತಿಯನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
6. ಈ ಕಾಮಗಾರಿಗಾಗಿ ಬಿಡುಗಡೆಯಾದ ಅನುದಾನವನ್ನು ಸಕ್ಷಮ ಪ್ರಾಧಿಕಾರದ ಅನುಮೋದನೆಯಿಲ್ಲದೆ ಇತರೆ ಕಾಮಗಾರಿಗಳಿಗೆ ಬಳಸತಕ್ಕದ್ದಲ್ಲ.
7. ಕಾಮಗಾರಿಯ ಪ್ರಗತಿಯ ಕುರಿತು ಹಿಂಬಾಲಿಕಾ ಕ್ರಮವಹಿಸಿ ಉತ್ತಮ ಗುಣಮಟ್ಟದ ಕಾಮಗಾರಿ ಕೈಗೊಂಡಿರುವುದನ್ನು ಇಲಾಖೆಯು ಧೃಡಪಡಿಸಿಕೊಳ್ಳತಕ್ಕದ್ದು.
8. ಪರಿಷ್ಕೃತ ಅಂದಾಜು ವೆಚ್ಚಕ್ಕೆ ಅವಕಾಶ ನೀಡದೇ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸತಕ್ಕದ್ದು.

ಈ ವೆಚ್ಚವನ್ನು 2024-25ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 2041-00-102-0-03- ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ನಿಧಿಯಿಂದ ಅನುದಾನ-051-ಸಾಮಾನ್ಯ ವೆಚ್ಚಗಳಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ ಆಇ 397 ವೆಚ್ಚ-11/2024(E) ದಿನಾಂಕ:02.09.2024 ಮತ್ತು 31.01.2025 ರಲ್ಲಿ ನೀಡಿರುವ ಸಹಮತಿ ಮತ್ತು ಯೋಜನಾ ಇಲಾಖೆಯು ಟಿಪ್ಪಣಿ ಸಂಖ್ಯೆ PDS-MED/91/2024 ದಿನಾಂಕ:04.09.2024ರಲ್ಲಿ ನೀಡಿರುವ ಅಭಿಪ್ರಾಯ ಹಾಗೂ ಸರ್ಕಾರದ ಆದೇಶ ಸಂಖ್ಯೆ: FD 7 TFP 2024, ದಿನಾಂಕ:03.01.2025 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Pushpa V.S.

**(ಪುಷ್ಪ ವಿ .ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

<u>ಇವರಿಗೆ</u>:-

1. ಪ್ರಧಾನ ಮಹಾಲೇಖಪಾಲರು (ಆಡಿಟ್ 2) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಮತ್ತು ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ, ಟಿ.ಟಿ.ಎಂ.ಸಿ. ಸಂಕೀರ್ಣ, 'ಎ' ಬ್ಲಾಕ್, 1ನೇ ಮಹಡಿ, ಶಾಂತಿನಗರ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು
4. ಅಪರ ಆಯುಕ್ತರು, ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ, 7ನೇ ಮಹಡಿ, ಎಂ.ಎಸ್.ಐ.ಎಲ್. ಕಟ್ಟಡ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
5. ಖಜಾನಾಧಿಕಾರಿಗಳು, ರಾಜ್ಯ ಹುಜುರ್ ಖಜಾನೆ, ಬೆಂಗಳೂರು.

--4

<u>ಪ್ರತಿ:-</u>

1. ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಉಪ/ಅಧೀನ ಕಾರ್ಯದರ್ಶಿ, ಸಾರಿಗೆ ಇಲಾಖೆ ರವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು
6. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ/ ಒ.ಡಿ.ಜಿ.ಸಿ.